ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.149/2019

| | |
|---|---|
| ಸಿ.ಡಬ್ಲ್ಯೂ : | 2 |
| ಪಿ.ಡಬ್ಲ್ಯೂ : | 1 |

| | | |
|---|---|---|
| ಸಾಕ್ಷಿದಾರರ ಹೆಸರು | : | ನಾಜಿಯಾ |
| ತಂದೆ/ ಪತಿಯ ಹೆಸರು | : | ಪರ್ವಿಸ್ ಖಾನ್ |
| ವಯಸ್ಸು | : | 17 ವರ್ಷ |
| ವೃತ್ತಿ | : | ವಿದ್ಯಾರ್ಥಿ |
| ವಾಸ | : | ಪೇಪರ್ ಮಿಲ್ ಸರ್ಕಲ್, ಕುಪ್ಪೆದಡ ಗ್ರಾಮ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 12.11.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನನಗೆ ಆರೋಪಿತರು ಗೊತ್ತಿರುತ್ತಾರೆ. ಚಾಸಾ.1 ರವರು ನನ್ನ ಅತ್ತೆ ಇರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಸೈಕಲ್ ನಲ್ಲಿ ಹೋಗುವಾಗ ಬಿದ್ದು ಗಾಯ ಮಾಡಿಕೊಂಡಿರುತ್ತೇನೆ. ದೂರಿನಲ್ಲಿ ಹೇಳಿರುವಂತೆ ಯಾವುದೇ ಘಟನೆ ಆಗಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿತರು ನನಗೆ ಹೊಡಿಬಡಿ ಮಾಡಿರುವುದಿಲ್ಲ. ಪ್ರಾಣ ಬೆದರಕೆ ಹಾಕಿರುವುದಿಲ್ಲ ಹಾಗೂ ಅವ್ಯಾಚ ಶಬ್ದಗಳಿಂದ ಬೈದಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

<u>ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ</u>

ದಿಃ 04.03.2018 ರಂದು ಸಂಜೆ 4.00 ಗಂಟೆ ಸಮಯದಲ್ಲಿ ಚಾಸಾ.1 ರವರ ಮನೆಯ ಮುಂಭಾಗ ಆರೋಪಿತರು ಜಗಳ ತೆಗೆದು ಚಾಸಾ.1 ರವರಿಗೆ ಅವ್ಯಾಚ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿತರು ಒಂದು ಕಲ್ಲನ್ನು ನನ್ನ ಬಲಪಾದದ ಮೇಲೆ ಎತ್ತಿ ಹಾಕಿ ರಕ್ತ ಗಾಯ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿತರು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ.

ಈ ಘಟನೆಯ ಸಂಬಂಧ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂ ದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದರಿಂದ ಸಾಕ್ಷಿಯ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ.1 ಎಂದು, ಅದರಲ್ಲಿರುವ ಆಯ್ದ ಭಾಗವನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ</u>

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.